ಲಿಖಿತ ಮೂಲಕ ಉತ್ತರಿಸುವ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಬುಧವಾರ, ದಿನಾಂಕ : 04 ನೇ ಮಾರ್ಚ್, 2020

ಸರ್ವೆ ನಂ. 30 ಸರ್ಕಾರಿ ಜಾಗ ಹಂಚಿಕೆ ಮಾಡಿರುವ ಕುರಿತು

ಶ್ರೀ ಹೆಚ್.ಎಂ. ರಮೇಶ್ ಗೌಡ(ವಿಧಾನಸಭೆಯಿಂದ ಚುನಾಯಿತರಾದವರು) :-

219 (236) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬೆಂಗಳೂರು ನಗರ ಜಿಲ್ಲೆ, ಬೆಂಗಳೂರು ಉತ್ತರ ತಾಲ್ಲೂಕು, ಕಸಬಾ ಹೋಬಳಿಯ ಹೆಣ್ಣೂರು ಗ್ರಾಮದ ಸರ್ವೆ ನಂಬರ್ 30, ಸರ್ಕಾರಿ ಜಾಗವನ್ನು ಯಾವ ಉದ್ದೇಶಕ್ಕಾಗಿ ಯಾರಿಗೆ ಹಂಚಿಕೆ ಮಾಡಲಾಗಿದೆ ; (ಸಂಪೂರ್ಣ ವಿವರ ನೀಡುವುದು)

(ಆ) ಕಂದಾಯ ಇಲಾಖೆಯ ಈ ಜಾಗವನ್ನು ಯಾವ ಮಾನದಂಡಗಳನ್ನು ಆಧರಿಸಿ ಖಾಸಗಿ ವ್ಯಕ್ತಿಗೆ ಹಂಚಿಕೆ ಮಾಡಲಾಗಿದೆ ; ಹಂಚಿಕೆಯಾದ ಭೂಮಿಗಿಂತ ಹೆಚ್ಚು ಪಟ್ಟು ಒತ್ತುವರಿ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಸದರಿ ಸರ್ಕಾರಿ ಜಾಗದಲ್ಲಿ ಖಾಸಗಿ ವಾಣಿಜ್ಯ ವ್ಯವಹಾರಗಳನ್ನು ನಡೆಸಲು ಕಟ್ಟಡ ಕಾಮಗಾರಿ ಪ್ರಾರಂಭಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಅನುಮತಿ ನೀಡಿದೆಯೇ ? (ವಿವರ ನೀಡುವುದು)